ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಶಾಸಕರ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 10/11/2019

# ಅನರ್ಹರ ಪ್ರಕರಣ ಬುಧವಾರ ತೀರ್ಪು

ನವದೆಹಲಿ: ಶಾಸಕ ಸ್ಥಾನದಿಂದ ಅನರ್ಹಗೊಳಿಸಿ ಸ್ಪೀಕರ್ ನೀಡಿದ್ದ ಆದೇಶದ ಸಿಂಧುತ್ವ ಪ್ರಶ್ನಿಸಿರುವ ಪ್ರಕರಣದ ತೀರ್ಪನ್ನು ಸುಪ್ರೀಂ ಕೋರ್ಟ್ ಮುಂದಿನ ಬುಧವಾರ (ನವೆಂಬರ್ 13) ಬೆಳಿಗ್ಗೆ 10.30ಕ್ಕೆ ಪ್ರಕಟಿಸಲಿದೆ.

ನ್ಯಾಯಮೂರ್ತಿ ಎನ್.ವಿ. ರಮಣ ನೇತೃತ್ವದ ತ್ರಿಸದಸ್ಯ ಪೀಠವು, ಪ್ರಕರಣದ ವಿಚಾರಣೆಯನ್ನು ಪೂರ್ಣಗೊಳಿಸಿ ಕಳೆದ ಅಕ್ಟೋಬರ್ 25ರಂದು ತೀರ್ಪನ್ನು ಕಾಯ್ದಿರಿಸಿತ್ತು. ತೀರ್ಪು ಪ್ರಕಟಣೆ ವಿಳಂಬವಾಗಿದೆ. ಹಾಗಾಗಿ ಉಪ ಚುನಾವಣೆ ಮುಂದೂಡಬೇಕು ಎಂದು ಕೋರಿ ಅನರ್ಹರು ಶುಕ್ರವಾರ ಅರ್ಜಿ ಸಲ್ಲಿಸಿದ್ದರು.